ಇ) ಹೌದು.

ಕುಡುಚಿ ಜನಾಂಗದವರ ಬಗ್ಗೆ

3709 - ಶ್ರೀ ರಮಾನಾಥ ರೈ (ಬಂಟ್ವಾಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಕನಿಷ್ಟ ಹಿಂದುಳಿದಿರುವ ಕುಡುಚಿ ಜನಾಂಗದ ಜನಜೀವನದ ಬಗ್ಗೆ ಸರ್ಕಾರದಲ್ಲಿ ಮಾಹಿತಿ ದೊರೆಯುವುದೇ?

ಆ) ಮಾಹಿತಿಯದ್ದಲ್ಲಿ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಬಹಳಷ್ಟು ಹಿಂದುಳಿದಿರುವ ಈ ಪಂಗಡವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆಯೇ?

ಇ) ಇಲ್ಲವಾದಲ್ಲಿ ಈ ಬಗ್ಗೆ ಸರ್ಕಾರವು ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಇಲ್ಲ.

ಇ) ಪರಿಶಿಷ್ಟ ಜಾತಿ ವರ್ಗದ ಪಟ್ಟಿಗೆ ಸೇರಿಸಬೇಕೆಂಬ ಈ ಜನಾಂಗದ ಬೇಡಿಕೆಯನ್ನು ಇದಕ್ಕಾಗಿಯೇ ರಚಿತವಾಗಿರುವ ಸಮಿತಿಯ ಮುಂದೆ ಇಡಲಾಗಿದೆ. ಸಮಿತಿಯ ಶಿಫಾರಸ್ಸಿನ ಮೇಲೆ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ.

ಹೊನ್ನಾಳಿ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

3717 - ಡಾ ಡಿ.ಬಿ. ಗಂಗಪ್ಪ (ಹೊನ್ನಾಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊನ್ನಾಳಿಯ ಸರಕಾರಿ ಆಸ್ಪತ್ರೆಯನ್ನು 50ಹಾಸಿಗೆಗಳ ಆಸ್ಪತ್ರೆಯನ್ನಾಗಿ ಪರಿಗಣಿಸಿ ಮೇಲ್ದರ್ಜೆಗೇರಿಸಲು ಸರ್ಕಾರವು ಕ್ರಮ ಕೈಗೊಂಡಿದೆಯೇ?

ಆ) ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ?

ಶ್ರೀ ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಆಂಗ್ಲೋ ಇಂಡಿಯನ್ ಜನಾಂಗವನ್ನು ಹಿಂದುಳಿದ ಪಟ್ಟಿಗೆ ಸೇರಿಸುವ ಬಗ್ಗೆ

3745 - ಶ್ರೀ ಡೇರಿಕ್ ಎಂ.ಬಿ. ಫುಲನ್ ಷಾ (ನಾಮನಿರ್ದೇಶ ಹೊಂದಿದವರು): ಮಾನ್ಯ ಸಮಾಜಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೂರನೇ ಹಿಂದುಳಿದ ವರ್ಗಗಳ ಆಯೋಗದ ವರದಿಯ ಬಗ್ಗೆ ರಚಿಸಲಾಗಿರುವ ಸಂಪುಟ ಉಪ ಸಮಿತಿ ಅಖಿಲ ಭಾರತ ಪ್ರಗತಿಪರ ಆಂಗ್ಲೋ ಇಂಡಿಯನ್ ಸಾಮಾಜಿಕ ಸಾಂಸ್ಕೃತಿಕ ಶೈಕ್ಷಣಿಕ ಮತ್ತು ಆರ್ಥಿಕ ಕಲ್ಯಾಣ ಸಂಘದವರು ಆಂಗ್ಲೋ ಇಂಡಿಯನ್ ಸಮುದಾಯದವರನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸುವ ಸಲುವಾಗಿ ಮನವಿಯನ್ನು ಸಲ್ಲಿಸಿರುತ್ತಾರೆಯೇ?

ಆ) ಸರ್ಕಾರವು ಆಂಗ್ಲೋ ಇಂಡಿಯನರ ಆತಿ ಹಿಂದುಳಿದಿರುವಿಕೆಯನ್ನು ಗಮನಿಸಿದೆಯೇ?